ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 10–12–2015

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಮಾನವ ಅಭಿವೃದ್ಧಿ ವರದಿ ಬಿಡುಗಡೆ ಕಾರ್ಯಕ್ರಮ:<br><br>ವರದಿ ಬಿಡುಗಡೆ:<br><br>ಸಿದ್ದರಾಮಯ್ಯ,<br><br>ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ | 11–12–2015<br>ಶುಕ್ರವಾರ<br>ಅಪರಾಹ್ನ<br>12–00 ಗಂಟೆಗೆ | ಬ್ಯಾಂಕ್ವೆಟ್ ಹಾಲ್, ವಿಧಾನ ಸೌಧ, ಬೆಂಗಳೂರು |
| 2 | **Press Conference:**<br><br>**Chief Postmaster General, Karnataka Circle** | **11-12-2015<br>Friday<br>at<br>4-00 P.M.** | **Office of the Chief Postmaster General, Karnataka Circle, Palace Road, Bangalore -560 001 (Next to Jain University Bangalore)** |

## ಮಾಧ್ಯಮ ಮುಖ್ಯಸ್ಥರ ಗಮನಕ್ಕೆ

ಡಿಸೆಂಬರ್ 27 ರಂದು ನಡೆಯಲಿರುವ ವಿಧಾನ ಪರಿಷತ್ ಚುನಾವಣೆ ಸಂದರ್ಭದಲ್ಲಿ ಮತಗಟ್ಟೆ ಹಾಗೂ ಮತ ಎಣಿಕೆ ಕೇಂದ್ರಗಳಿಗೆ ಪರವಾನಗಿ ಪತ್ರವನ್ನು ಮುಖ್ಯ ಚುನಾವಣಾಧಿಕಾರಿಗಳ ಕಚೇರಿಯಿಂದ ವಿತರಿಸಲಾಗುವುದು. ಆದ್ದರಿಂದ ತಮ್ಮ ಸಂಸ್ಥೆಯಿಂದ ಚುನಾವಣಾ ವರದಿಗೆ ನಿಯೋಜಿಸುವ ಮಾಧ್ಯಮ ಪ್ರತಿನಿಧಿಗಳ ಹೆಸರು, ಪದನಾಮ ಮೊಬೈಲ್ ಸಂಖ್ಯೆ ಸೇರಿದಂತೆ ಅವರ ಪೂರ್ಣ ಮಾಹಿತಿ ಹಾಗೂ ಅವರ ಇತ್ತೀಚಿನ ಮೂರು ಭಾವಚಿತ್ರಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಗೆ 15–12–2015 ರೊಳಗೆ ಸಲ್ಲಿಸಬೇಕು. ತಡವಾಗಿ ಸಲ್ಲಿಸುವ ಮನವಿಯನ್ನು ಪರಿಗಣಿಸುವುದಿಲ್ಲ.

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ರಾಷ್ಟ್ರೀಯ ಲೋಕ ಅದಾಲತ್

ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾತೆ)

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಕರ್ನಾಟಕ ಉಚ್ಛ ನ್ಯಾಯಾಲಯ, ಕಾನೂನು ಸೇವಾ ಸಮಿತಿ, ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಮತ್ತು ರಾಜ್ಯ ವಕೀಲರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ 12 ರಂದು ಬೆಳಿಗ್ಗೆ 10-00 ಗಂಟೆಗೆ ಕರ್ನಾಟಕ ಉಚ್ಛ ನ್ಯಾಯಾಲಯದ ಎರಡನೇ ಮಹಡಿಯಲ್ಲಿರುವ ಕಾನೂನು ಸೇವೆ ಪ್ರಾಧಿಕಾರದ ಸಭಾಂಗಣದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ವಿ. ಗೋಪಾಲ್ ಗೌಡ ಅವರು ರಾಷ್ಟ್ರೀಯ ಲೋಕ ಅದಾಲತ್ ಉದ್ಘಾಟಿಸುವರು. ಕರ್ನಾಟಕ ಉಚ್ಛ ನ್ಯಾಯಾಲಯದ ಹಂಗಾಮಿ ಮುಖ್ಯ ನ್ಯಾಯಾಧೀಶ ಹಾಗೂ ಕರ್ನಾಟಕ ಕಾನೂನು ಸೇವಾ ಪ್ರಾಧಿಕಾರದ ಮುಖ್ಯ ಸಂಚಾಲಕರಾದ ನ್ಯಾಯಮೂರ್ತಿ ಸುಬ್ರೋ ಕಮಲ್ ಮುಖರ್ಜಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾದ ಕರ್ನಾಟಕ ಉಚ್ಛ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷ ನ್ಯಾಯಮೂರ್ತಿ ಎನ್. ಕೆ. ಪಾಟೀಲ್, ಕರ್ನಾಟಕ ರಾಜ್ಯ ಅಡ್ವೋಕೇಟ್ ಜನರಲ್ ಶ್ರೀ ಮಧುಸೂಧನ್ ಆರ್. ನಾಯಕ್, ಕರ್ನಾಟಕ ರಾಜ್ಯ ಬಾರ್ ಕೌನ್ಸಿಲ್ ಅಧ್ಯಕ್ಷ ಎ.ಆರ್. ಪಾಟೀಲ್ ಮತ್ತು ರಾಜ್ಯ ವಕೀಲರ ಸಂಘದ ಅಧ್ಯಕ್ಷ ಹೆಚ್.ಸಿ. ಶಿವರಾಂ ಅವರುಗಳು ಪಾಲ್ಗೊಳ್ಳುವರು.

ಪಲ್ಲವಿ:ಬಾಬು:ಜಿಪಿಆರ್

## VIDYALAYA ENTRANCE SELECTION TEST

**Bangalore, December 10, (Karnataka Information)**

JAWAHAR NAVODAYA VIDYALAYA SELECTION TEST-2016 to **class VI** in Jawahar Navodaya Vidyalayas scheduled to be held on **Saturday**, the 9th **January 2016 from11.30 am to 1.30.p.m.**

All Registered candidates belonging to **Bangalore Urban District** are hereby informed that the Admit Cards are handed over to the concerned **BEO office.**

**PALLAVI/BABU/KM**

## ರಾಜ್ಯದ ನೀರಾವರಿ ಯೋಜನೆಗಳ ಅನುಷ್ಠಾನಕ್ಕೆ ದಿ. ನಿಜಲಿಂಗಪ್ಪ ಶ್ರಮ

. – ಶ್ರೀ ಸಿದ್ದರಾಮಯ್ಯ

**ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾತೆ)**

ರಾಜ್ಯದಲ್ಲಿನ ಬಹುತೇಕ ನೀರಾವರಿ ಯೋಜನೆಗಳನ್ನು ಅನುಷ್ಠಾನಕ್ಕೆ ತರುವ ಮೂಲಕ ರೈತರ ಆರ್ಥಿಕ ಸ್ಥಿತಿಯನ್ನು ಸುಧಾರಿಸಿದವರು ದಿವಂಗತ ಎಸ್. ನಿಜಲಿಂಗಪ್ಪ ಅವರು ಎಂದು ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಸ್ಮರಿಸಿದರು.

ರಾಜ್ಯದ ಮಾಜಿ ಮುಖ್ಯಮಂತ್ರಿ ದಿವಂಗತ ಎಸ್. ನಿಜಲಿಂಗಪ್ಪ ಅವರ 113 ನೇ ಜನ್ಮ ದಿನದ ಅಂಗವಾಗಿ ವಿಧಾನ ಸೌಧದ ಆವರಣದಲ್ಲಿರುವ ಅವರ ಪ್ರತಿಮೆಗೆ ಇಂದು ಮಾಲಾರ್ಪಣೆ ಮಾಡಿ ಸುದ್ಧಿಗಾರರೊಂದಿಗೆ ಮಾತನಾಡಿದ ಮುಖ್ಯಮಂತ್ರಿಗಳು ಕರ್ನಾಟಕ ಏಕೀಕರಣ ಆಂದೋಲನದಲ್ಲಿ ಮಂಚೂಣಿಯಲ್ಲಿದ್ದ ನಿಜಲಿಂಗಪ್ಪ ಅವರು ಪ್ರಾಮಾಣಿಕ ಹಾಗೂ ದಕ್ಷ ರಾಜಕಾರಣಿಯಾಗಿ ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ದ ಅಪರೂಪದ ನಾಯಕರಾಗಿದ್ದರು ಎಂದರು.

ತಮ್ಮ ಜೀವಿತದ ಕಡೆಯವರೆಗೂ ಭ್ರಷ್ಠಾಚಾರದ ವಿರುದ್ಧವಾಗಿದ್ದ ದಿ. ನಿಜಲಿಂಗಪ್ಪ ಅವರು ತಮ್ಮ ಸಚಿವ ಸಂಪುಟದ ಸಹೋದ್ಯೋಗಿಗಳು ಭ್ರಷ್ಠಾಚಾರ ಮಾಡುತ್ತಿದ್ದಾರೆ ಎಂಬುದು ಗೊತ್ತಾದರೆ ನೇರವಾಗಿಯೆ ಅವರನ್ನು ಕರೆದು ಬುದ್ಧಿವಾದ ಹೇಳುತ್ತಿದ್ದರು ಎಂದ ಮುಖ್ಯಮಂತ್ರಿಗಳು ಅವರು ಪ್ರತಿಪಾದಿಸಿದ್ದ ಸಮಾಜಮುಖಿ ಮೌಲ್ಯಗಳು ಇಂದಿಗೂ ಪ್ರಸ್ತುತ. ಅವುಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಂಡು ಪ್ರಗತಿ ಪಥದಲ್ಲಿ ಮುನ್ನಡೆಯೋಣ ಎಂದರು.

ಕಳೆದ ಆಗಸ್ಟ್ ತಿಂಗಳಲ್ಲಿ ಬರಪರಿಹಾರದ ಹಣ ಕೋರಿ ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯಲಾಗಿದ್ದರೂ ಈವರೆವಿಗೂ ಕೇಂದ್ರ ಸರ್ಕಾರ ಬರಪರಿಹಾರ ಹಣ ನೀಡಿಲ್ಲ ಎಂದ ಶ್ರೀ ಸಿದ್ದರಾಮಯ್ಯ ಅವರು ರಾಜ್ಯದಲ್ಲಿನ ಬರ ಪರಿಹಾರಕ್ಕೆ ಸಂಬಂಧಿಸಿದಂತೆ ನಮ್ಮ ಸರ್ಕಾರ 500 ರಿಂದ 600 ಕೋಟಿ ಹಣ ಖರ್ಚು ಮಾಡಿದ್ದು, ಬೆಳೆ ಪರಿಹಾರ ಹಣವನ್ನು ನೀಡಲಾಗಿದೆ ಎಂದರು.

ಸಚಿವರುಗಳಾದ ಮಹದೇವಪ್ರಸಾದ್, ಹೆಚ್. ಆಂಜನೇಯ, ವಿನಯ್‌ಕುಲಕರ್ಣಿ, ವಿಧಾನ ಪರಿಷತ್ ಮಾಜಿ ಸದಸ್ಯ ಎಂ.ವಿ. ರಾಜಶೇಖರನ್, ವಾಟಾಳ್ ನಾಗರಾಜ್, ಮಾಜಿ ಸಚಿವ ಪಿ.ಜಿ.ಆರ್. ಸಿಂಧ್ಯಾ, ಸರ್ಕಾರದ ಮುಖ್ಯ ಕಾರ್ಯದರ್ಶಿ ಕೌಶಿಕ್ ಮುಖರ್ಜಿ ಸೇರಿದಂತೆ ಸರ್ಕಾರದ ಉನ್ನತಾಧಿಕಾರಿಗಳು ಉಪಸ್ಥಿತರಿದ್ದರು.

ಬಾಬು/ಕೆಪಿಪಿ/ಕೆಎಂ

## ಮೈಸೂರು ಮಿನರಲ್ಸ್ ಸಂಸ್ಥೆಯಿಂದ ಸರ್ಕಾರಕ್ಕೆ 5.95 ಕೋಟಿ ಚೆಕ್

**ಬೆಂಗಳೂರು, ಡಿಸೆಂಬರ್ 10 (ಕರ್ನಾಟಕ ವಾತೆ)**

ಮೈಸೂರು ಮಿನರಲ್ಸ್ ಸಂಸ್ಥೆಯು ಸರ್ಕಾರಕ್ಕೆ ನೀಡಬೇಕಾದ ತನ್ನ ಲಾಭಾಂಶದ 5.95 ಕೋಟಿ ರೂ. ಹಣವನ್ನು ಮುಖ್ಯಮಂತ್ರಿ ಬೆಳಿಗ್ಗೆ ವಿಧಾನ ಸೌಧದ ಅವರ ಕಛೇರಿಯಲ್ಲಿ ಇಂದು ಗಣಿ ಮತ್ತು ಭೂ ವಿಜ್ಞಾನ ಸಚಿವ ವಿನಯ್‌ಕುಲಕರ್ಣಿ ಅವರು ನೀಡಿದರು. ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಹಿರಿಯ ಅಧಿಕಾರಿಗಳು ಈ ಸಂದರ್ಭದಲ್ಲಿ ಹಾಜರಿದ್ದರು.

ಬಾಬು/ಕೆಪಿಪಿ/ಕೆಎಂ